**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

ದಿನಾಂಕಃ 09 ನೇ ಜೂನ್ ತಿಂಗಳು 2026ರಂದು

**ಸಿಸಿ ನಂ.88/2026**

**ಫಿರ್ಯಾದುದಾರರುಃ** ಸರಕಾರ (ಹುಣಸೂರು ಪಟ್ಟಣ ಪೊಲೀಸರಿಂದ)

– ವಿರುದ್ಧ –

**ಆರೋಪಿಃ** ಹರೀಶ್., ಬಿನ್ ಶಂಕರೇಗೌಡ, 31 ವರ್ಷ,
ಕಾರ್ಮಿಕ, ವಾಸಃ ಅಡಗೂರು ಗ್ರಾಮ,
ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ.

**ದೋಷಾರೋಪಣೆ**

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 25.12.2025ರಂದು ಮಧ್ಯಾಹ್ನ 3.00 ಗಂಟೆ ಸಮಯದಲ್ಲಿ ಹುಣಸೂರು ಪಟ್ಟಣ ಪೊಲೀಸ್ ಠಾಣಾ ಸರಹದ್ದು ಹುಣಸೂರು – ಹೆಚ್.ಡಿ.ಕೋಟೆ ಮುಖ್ಯ ರಸ್ತೆಯಲ್ಲಿ ಚಿಕ್ಕಹುಣಸೂರು ಗ್ರಾಮದ ಕೆರೆ ಹತ್ತಿರ ಟೀ ಅಂಗಡಿ ಮುಂದೆ ಚಾಸಾ.2 ಪ್ರಕಾಶ್ ರವರು ತಮ್ಮ ಕೆಎ–09/ಜೆಹೆಚ್–5132ರ ಹೀರೊ ಸ್ಪ್ಲೆಂಡರ್ ಪ್ಲಸ್ ಬೈಕ್ ನ್ನು ಹುಣಸೂರು ಕಡೆಯಿಂದ ಓಡಿಸಿಕೊಂಡು ಹೋಗುತ್ತಿದ್ದಾಗ ಅದೇ ಸಮಯಕ್ಕೆ ಆರೋಪಿಯಾದ ನೀವು ಕೆಎ–09/ಜೆಇ–4243ರ ಹೀರೊ ಸ್ಪ್ಲೆಂಡರ್ ಪ್ಲಸ್ ಬೈಕ್ ನ್ನು ಹುಣಸೂರು ಕಡೆಯಿಂದ ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ 281 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಮೇಲೆ ವಿವರಿಸಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಹಿಂದಿನಿಂದ ಚಾಸಾ.2ರವರು ಓಡಿಸಕೊಂಡು ಹೋಗುತ್ತಿದ್ದ ಬೈಕ್ ಡಿಕ್ಕಿ ಮಾಡಿದ ಪರಿಣಾಮ ಚಾಸಾ.2ರವರು ಬೈಕ್

ಸಮೇತ ಕೆಳಕ್ಕೆ ಬಿದ್ದಾಗ ಅವರ ಬಲ ಭುಜದ ಹತ್ತಿರ ಮತ್ತು ಕಾಲಿನ ಮಂಡಿ ಹತ್ತಿರ ತೀವ್ರ ಸ್ವರೂಪದ ಗಾಯಪಡಿಸಿರುತ್ತೀರಿ ಎಂದು ತನಿಖೆಯಿಂದ ದೃಢಪಟ್ಟಿದ್ದು, ಆದುದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಾಣಿಸಿದ ಆರೋಪಣೆಯ ಬಗ್ಗೆ ನಿಮ್ಮನ್ನು ಈ ನ್ಯಾಯಾಲಯದ ಮುಂದೆ ವಿಚಾರಣೆಗೆ ಗುರಿಪಡಿಸುತ್ತೇನೆ ಎಂದು ಈ ಮೂಲಕ ಆಜ್ಞೆ ಮಾಡುತ್ತಿದ್ದೇನೆ.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂ., ಹುಣಸೂರು.**

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು.**

**ಸಿಸಿ ನಂ.88/2026**

| | | |
|---|---|---|
| ಆಪಾದಿತನ ಹೆಸರು | : | ಹರೀಶ್., |
| ತಂದೆಯ ಹೆಸರು | : | ಶಂಕರೇಗೌಡ, |
| ವಯಸ್ಸು | : | 31 ವರ್ಷ, |
| ಉದ್ಯೋಗ | : | ಕಾರ್ಮಿಕ, |
| ವಾಸಸ್ಥಳ | : | ಅಡಗೂರು ಗ್ರಾಮ,<br>ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ. |

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 234ರ ಅಡಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1 : | ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆ 2 : | ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ? |
| ಉತ್ತರಃ | ತಪ್ಪು ಒಪ್ಪಿಕೊಳ್ಳುತ್ತೇನೆ |

ಮೇಲ್ಕಾಣಿಸಿದ ಹೇಳಿಕೆಯನ್ನು ದಿನಾಂಕಃ 09.06.2026 ರಂದು ನನ್ನ ಉಪಸ್ಥಿತಿಯಲ್ಲಿ ಆರೋಪಿಯಿಂದ ಪಡೆಯಲಾಗಿದ್ದು, ಸದರಿ ಹೇಳಿಕೆಯು ಆರೋಪಿಯು ಕೊಟ್ಟ ನಿಜವಾದ ಹೇಳಿಕೆಯಾಗಿದೆ.

Sd/-
(ಅನಿತ)
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂ., ಹುಣಸೂರು.**